# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 430 (576)

ವಿಧಾನ ಪರಿಷತ್ ಸದಸ್ಯರ ಹೆಸರು : ಶ್ರೀಮತಿ ಹೇಮಲತಾ ನಾಯಕ್
(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವವರು : ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

ಉತ್ತರಿಸುವ ದಿನಾಂಕ : 11.03.2025

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಇತ್ತೀಚೆಗೆ ಜರುಗಿದ ವಿಶ್ವ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ಹೂಡಿಕೆ ಮಾಡಲು ಒಪ್ಪಂದ ಮಾಡಿಕೊಂಡಿರುವ ಕೈಗಾರಿಕೆಗಳು ಯಾವುವು; (ವಿವರ ನೀಡುವುದು) | ಇತ್ತೀಚೆಗೆ ಜರುಗಿದ ವಿಶ್ವ ಬಂಡವಾಳ ಹೂಡಿಕೆದಾರರ ಸಮಾವೇಶದಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ಹೂಡಿಕೆ ಮಾಡಲು 3 ಕಂಪನಿಗಳೊಂದಿಗೆ ಒಡಬಂಡಿಕೆ ಮಾಡಿಕೊಳ್ಳಲಾಗಿದೆ. ಅವುಗಳಲ್ಲಿ ಬಲ್ಡೋಟಾ ಕಂಪನಿಯ MoU ಒಳಗೊಂಡಿರುತ್ತದೆ.<br><br>ವಿವರಗಳನ್ನು **ಅನುಬಂಧ-1** ರಲ್ಲಿ ಒದಗಿಸಿದೆ. |
| ಆ | ಸದರಿ ಸಮಾವೇಶದಲ್ಲಿ ಬಲ್ಡೋಟಾ ಕಂಪನಿಯವರು ಉಕ್ಕು ಕಾರ್ಖಾನೆ ಸ್ಥಾಪನೆ ಮಾಡಲು ಮುಂದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈಗಾಗಲೇ ಅವರ ಕೈಗಾರಿಕೆಯಿಂದ ಕೊಪ್ಪಳ ನಗರವು ಪರಿಸರ ಮಾಲಿನ್ಯದಿಂದ ತತ್ತರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅಂತಹ ಕೈಗಾರಿಕೆಗಳಿಗೆ ಮತ್ತೆ ವಿಸ್ತರಿಸಲು ಅವಕಾಶ ನೀಡಲು ಕಾರಣವೇನು; (ವಿವರ ನೀಡುವುದು) | ಬಾಲ್ಡೋಟಾ ಗ್ರೂಪ್‌ನ ಸಂಸ್ಥೆಯಾದ ಎಂಎಸ್‌ಪಿಎಲ್ ಕೈಗಾರಿಕೆ ಒಳಗೊಂಡಂತೆ ಇತರೆ ಕೈಗಾರಿಕೆಗಳಿಂದ ಮಾಲಿನ್ಯವಾಗುತ್ತಿರುವ ಬಗ್ಗೆ ಅಧ್ಯಯನ ನಡೆಸಲು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಒಂದು ತಂಡವನ್ನು ರಚಿಸಿದ್ದು, ದಿನಾಂಕ 10.12.2024 ಮತ್ತು 12.12.2024 ರಂದು ಕೊಪ್ಪಳ ತಾಲ್ಲೂಕಿನಲ್ಲಿರುವ ವಿವಿಧ ಕೈಗಾರಿಕೆಗಳನ್ನು ಪರಿವೀಕ್ಷಣೆ ಮಾಡಿದ್ದು, ಈ ತಂಡದ ವರದಿಯನ್ನಾಧರಿಸಿ ಅನುಪಾಲನಾ ವರದಿಯನ್ನು ಸಲ್ಲಿಸುವಂತೆ ಸಂಬಂಧ ಪಟ್ಟ ಕೈಗಾರಿಕೆಗಳಿಗೆ ನೋಟೀಸ್‌ಅನ್ನು ಜಾರಿ ಮಾಡಲಾಗಿರುತ್ತದೆ. |
| ಇ | ಈಗಾಗಲೇ ಕಾರ್ಯನಿರ್ವಹಿಸುತ್ತಿರುವ ಬಲ್ಡೋಟಾ ಕೈಗಾರಿಕೆಯಲ್ಲಿ ಎಷ್ಟು ಜನ ಉದ್ಯೋಗಿಗಳು ಕೆಲಸ ನಿರ್ವಹಿಸುತ್ತಿದ್ದಾರೆ; ವಿವಿಧ ವೃಂದಲ್ಲಿ ಕಾರ್ಯನಿರ್ವಹಿಸುತ್ತಿರುವ ಉದ್ಯೋಗಿಗಳಲ್ಲಿ ಸ್ಥಳೀಯ ಕೊಪ್ಪಳ ಉದ್ಯೋಗಿಗಳೆಷ್ಟು; ಅದರಲ್ಲಿ ರಾಜ್ಯದ ಉದ್ಯೋಗಿಗಳೆಷ್ಟು; ಹೊರರಾಜ್ಯದ ಉದ್ಯೋಗಿಗಳೆಷ್ಟು; (ವಿವರ ನೀಡುವುದು) | ಈಗ ಕಾರ್ಯನಿರ್ವಹಿಸುತ್ತಿರುವ ಎಂಎಸ್‌ಪಿಎಲ್ ಕೈಗಾರಿಕೆಯಲ್ಲಿ 342 ಜನ ಉದ್ಯೋಗಿಗಳು ಕೆಲಸ ನಿರ್ವಹಿಸುತ್ತಿದ್ದು, ಅದರಲ್ಲಿ 331 ಜನ ಕನ್ನಡಿಗರಾಗಿದ್ದು, ಬಾಕಿ ಉಳಿದ 11 ಜನ ಹೊರ ರಾಜ್ಯದವರಾಗಿರುತ್ತಾರೆ. |
| ಈ | ಬಲ್ಡೋಟಾ ಕಂಪನಿ ವಿಸ್ತರಣೆಗೆ ಸ್ಥಳೀಯವಾಗಿ ವಿರೋಧ ವ್ಯಕ್ತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರದ ನಿಲುವೇನು? | ಬಲ್ಡೋಟಾ ಕಂಪನಿ ವಿಸ್ತರಣೆಗೆ ಸ್ಥಳೀಯವಾಗಿ ವಿರೋಧ ವ್ಯಕ್ತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಈ ಬಗ್ಗೆ ಪರಿಶೀಲಿಸಲಾಗುತ್ತಿದೆ. |

**ಸಿಐ 76 ಎಸ್‌ಪಿಐ 2025**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು

Annexure-1

Details of MOU's Signed during "Invest Karnataka 2025: Global Investors Meet" to be invested in Koppal District

| Sl. No. | Company name | Investment amount (INR Cr.) | Employment in No.s | Sector | District |
|---|---|---|---|---|---|
| 1 | Baldota Steel & Power Limited | 54000 | 15000 | Core | Koppal |
| 2 | Kirloskar Ferrous Limited | 3000 | 2600 | Core | Koppal |
| 3 | Serentica Renewables India Pvt Ltd | 43975 | 3503 | Renewable Energy | Koppal |
| | **Total** | **100975** | **21103** | | |

Chief Operating Officer
Invest Karnataka Forum
Bengaluru